**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿಸಿ ನಂಬರ : 1087/2012**

| | | | |
|---|---|---|---|
| ಸಾಕ್ಷಿಯ ಹೆಸರು | ಃ ರಂಗನಾಥ | | ಸಿ.ಡಬ್ಲ್ಯು 3 |
| ತಂದೆಯ ಹೆಸರು | ಃ ಚಿನ್ನಸ್ವಾಮಿ | | ಪಿ.ಡಬ್ಲ್ಯು 3 |
| ವಯಸ್ಸು | ಃ 56 ವರ್ಷ | | |
| ಉದ್ಯೋಗ | ಃ ವ್ಯವಸಾಯ | | |
| ವಾಸ ಸ್ಥಳ | ಃ ಜೋಡಿ ಕೊಡಿಹಳ್ಳಿ. | | |

**ದಿನಾಂಕಃ 11-06-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ನನಗೆ ಚಾಸಾ-2 ರವರ ಮತ್ತು ಆರೋಪಿಯ ಪರಿಚಯ ಇದೆ. ಇಬ್ಬರೂ ನಮ್ಮದೇ ಊರಿನವರು ಇರುತ್ತಾರೆ. ನನ್ನ ಸಹಿಗಳನ್ನು ನೋಡಿದರೆ ಗುರುಸುತ್ತೇನೆ. ಈಗ ತೋರಿಸುತ್ತಿರುವ ದಾಖಲೆಗಳ ಮೇಲೆ ನನ್ನ ಸಹಿಗಳು ಇವೆ, ಸದರಿ ದಾಖಲೆಯನ್ನು ನಿಪಿ.1 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿ.1 ಸಿ ಎಂದು ಗುರುತಿಸಲಾಯಿತು. ನನ್ನ ಜೊತೆ ಸದರಿ ದಾಖಲೆಗೆ ಮತ್ತೇ ಯಾರೇಲ್ಲಾ ಸಹಿ ಹಾಕಿದ್ದಾರೆ ಎಂದು ನೆನಪಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-**

ದಿನಾಂಕ 26-06-2021 ರಂದು ಆರೋಪಿಯು ತನ್ನ ಮನೆಯಲ್ಲಿ ಅಕ್ರಮವಾಗಿ ಮದ್ಯ ಸಂಗ್ರಹಿಸಿ ಮಾರಾಟ ಮಾಡುತ್ತಿದ್ದಾರೆ ಎಂಬ ಮಾಹಿತಿಯ ಮೇರೆಗೆ ಪೊಲೀಸರು ಆತನ ಮನೆಯ ಮೇಲೆ ದಾಳಿ ಮಾಡಿ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಪಂಚನಾಮೆ ಜರುಗಿಸಿ ಮು.ಮಾ.1 ಅನ್ನು ಅಮಾನತ್ತುಪಡಿಸಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಅದೇ ಸಮಯಕ್ಕೆ ಆರೋಪಿಯನ್ನು ದಸ್ತಗಿರಿ ಕೂಡಾ ಮಾಡಿದ್ದಾರೆ ಎಂದರೆ ಸರಿಯಲ್ಲ. ನಿಪಿ.1 ರ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ಹೇಳುತ್ತಾರೆ.

**ಮರುವಿಚಾರಣೆ :** ಇಲ್ಲಃ

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇ ಎ ಒ**

**Sd/-**

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ**
**ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.**